# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಸಹಾಯಕ ಕಾರ್ಯಪಾಲಕ ಅಭಿಯಂತರರು, ಯಲಹಂಕ ಉಪ ವಿಭಾಗ

## ಕೆಂಪೇಗೌಡ ವಾರ್ಡ್ ನಂ-01ರಲ್ಲಿ ದಿನಾಂಕ: 01-01-2022. ರಂದು ನಡೆದ ಸಮಿತಿ ಸಭಾ ನಡವಳಿ.

ಕೆಳಕಂಡ ಸದಸ್ಯರು ಹಾಗೂ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿರುತ್ತಾರೆ.

1. ಶ್ರೀ.ರಜನಿಕಾಂತ್ ಮಳ್ಳಿ. ನೊಡಲ್ ಅಧಿಕಾರಿಗಳು.
2. ಶ್ರೀ.ಮಲ್ಲಿನಾಥ ಮಲ್ಕಾಪುರ. ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿ.
3. ಶ್ರೀ.ಬಾಬರೆಡ್ಡಿ. ಸಹಾಯಕ ಅಭಿಯಂತರರು (ವಿದ್ಯುತ್ ವಿಭಾಗ).
4. ಶಶಿಕುಮಾರ್ ಸಹಾಯಕ ಅಭಿಯಂತರರು ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ವಿವೇಕ್. ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ-01.

ವಾರ್ಡ್ ಸಮಿತಿಯ ಪ್ರಸ್ತಾವಿಕ ಸಭೆಯ ಉದ್ದೇಶವನ್ನು ತಿಳಿಸಿ. ಸಭೆಯಲ್ಲಿ ಉಪಸ್ಥಿತರಿದ್ದ ನೊಡೆಲ್ ಅಧಿಕಾರಿಗಳು ಹಾಗೂ ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ನಡೆಸಲು ವಾರ್ಡ್ ಸಮಿತಿ ನೊಡೆಲ್ ಅಧಿಕಾರಿಗಳನ್ನು ಕೋರಲಾಯಿತು.

1. ಕೆಂಪೇಗೌಡ ವಾರ್ಡ್ ನಂ-01ರ ಯಲಹಂಕ ಕೆರೆಗೆ ಪುಟ್ಟೇನಹಳ್ಳಿ ಕಡೆಯಿಂದ ಯು.ಜಿ.ಡಿ. ನೀರು ಕಲುಷಿತ ನೀರನ್ನು ಬಿಡುತ್ತಿರುವ ಬಗ್ಗೆ ಅಕ್ಷೇಪಣೆ ವ್ಯಕ್ತಪಡಿಸಿರುವುದರಿಂದ ಸ್ಥಳ ಪರಿಶೀಲನೆ ಮಾಡಲು ಸಭೆಯಲ್ಲಿ ನೊಡೆಲ್ ಅಧಿಕಾರಿಗಳು ಸೂಚಿಸಿದರು.

2. ಕೆಂಪೇಗೌಡ ವಾರ್ಡ್ ನಂ -01ರಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ಇಲ್ಲದೇ ಇರುವುದರಿಂದ ದಿನನಿತ್ಯದ ಘನತ್ಯಾಜ್ಯ ನಿರ್ವಹಣೆ ಕೆಲಸಗಳನ್ನು ನಿರ್ವಹಿಸುವುದು ಕಷ್ಟಕರವಾಗಿದ್ದು, ಈಗಾಗಲೇ ಹಲವಾರು ಭಾರಿ ದೂರನ್ನು ನೀಡಿದ್ದರೂ ಸಹ ಈ ವಾರ್ಡ್‌ನಲ್ಲಿ ಕೆಲಸಗಳನ್ನು ನಿರ್ವಹಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ಬಂದಿರುವುದಿಲ್ಲ ಎಂದು ಸಭೆಯಲ್ಲಿ ಶ್ರೀ.ಅ.ಬ ಶಿವಕುಮಾರ್ ರವರು ಅಕ್ಷೇಪಣೆ ವ್ಯಕ್ತಪಡಿಸಿದರು.

3. ವಾರ್ಡ್‌ನ ವ್ಯಾಪ್ತಿಯಲ್ಲಿರುವ ರಸ್ತೆ ಬದಿಗಳಲ್ಲಿ ಬೀದಿ ದೀಪಗಳು ಹಾಗೂ ಹೈ ಮಾಸ್ಕ್ ಲೈಟ್‌ಗಳು ಸರಿಯಾದ ರೀತಿಯಲ್ಲಿ ನಿರ್ವಹಣೆ ಕೆಲಸ ಮಾಡುತ್ತಿರುವುದಿಲ್ಲ ಎಂದು ಸಭೆಯಲ್ಲಿ ಅಕ್ಷೆಪಣೆ ಸಲ್ಲಿಸಿದ್ದು, ಸದರಿ ದೂರಿನನ್ವಯ ಸ್ಥಳ ಪರಿಶೀಲನೆ ಮಾಡಿ ಬೀದಿ ದೀಪ ನಿರ್ವಹಣೆ ಮಾಡಲು ನೊಡೆಲ್ ಅಧಿಕಾರಿಗಳು ಸೂಚಿಸಿದರು.

4. ಮಾರುತಿನಗರ 24ನೇ ಅಡ್ಡರಸ್ತೆಯ ಮತ್ತು ಯಲಹಂಕ ಬಾಂಗ್ಲಾ ಶಾಲೆಯ ರಸ್ತೆಯ ಬದಿಯಲ್ಲಿ ಚರಂಡಿಯಲ್ಲಿ ಹೂಳು ತುಂಬಿರುವುದರಿಂದ ತೆರವುಗೊಳಿಸಿಕೊಡಬೇಕೆಂದು ಹಾಗೂ ಮುರಿದು ಬಿದ್ದಿರುವ ಆರ್.ಸಿ.ಸಿ ಕವರಿಂಗ್ ಸ್ಲ್ಯಾಬ್‌ಗಳನ್ನು ಅಳವಡಿಸಿಕೊಡಬೇಕೆಂದು ಸಾರ್ವಜನಿಕರು ಸಭೆಯಲ್ಲಿ ಮನವಿ ಸಲ್ಲಿಸಿದರು.

5. ವಾರ್ಡ್‌ನ ಪರಿಮಿತಿಯಲ್ಲಿರುವ ಕೆಲವು ಸ್ಥಳಗಳಲ್ಲಿ ಶಾಲಾ ಕಾಲೇಜಿನ ಮಕ್ಕಳು ಡ್ರಗ್ಸ್ ಬಳಸುತ್ತಿರುವ ಬಗ್ಗೆ ದೂರು ಬಂದಿರುವ ಹಿನ್ನಲೆಯಲ್ಲಿ ಆರಕ್ಷಕ ನಿರೀಕ್ಷಕರು ಯಲಹಂಕ ಪೊಲೀಸ್ ಠಾಣೆಗೆ ಪತ್ರ ಬರೆಯುವುದಾಗಿ ಸಭೆಯಲ್ಲಿ ನೋಡೆಲ್ ಅಧಿಕಾರಿಗಳು ತಿಳಿಸಿದರು.

6. ರೈತರ ಸಂತೆ ರಸ್ತೆ. ಕೋಗಿಲು ಮುಖ್ಯರಸ್ತೆ ಮತ್ತು ಡೌನ್ ಬಜಾರ್ ರಸ್ತೆಯಲ್ಲಿ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿಗಳನ್ನು ತೆರವುಗೊಳಿಸುವಂತೆ ಸಾರ್ವಜನಿಕರು ಸಭೆಯಲ್ಲಿ ಕೋರಿದ್ದು, ಮುಂದಿನ ವಾರದಲ್ಲಿ ಪಾದಚಾರಿ ಮಾರ್ಗಗಳಲ್ಲಿ ಇಟ್ಟಿರುವ ಅಂಗಡಿ ಮುಗ್ಗಟ್ಟುಗಳನ್ನು ತೆರವುಗೊಳಿಸುವುದಾಗಿ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

7. ಅಯ್ಯಪ್ಪ ಸ್ವಾಮಿ ದೇವಸ್ಥಾನದ ರಸ್ತೆಯನ್ನು ಡಾಂಬರಿಕರಣ ಮಾಡಿಕೊಡಬೇಕೆಂದು ಸಾರ್ವಜನಿಕರು ಸಭೆಯಲ್ಲಿ ಕೋರಿದರು. ಸಪ್ತಗಿರಿ ಬಡಾವಣೆಯಲ್ಲಿ ಖಾಲಿ ಸ್ಥಳದಲ್ಲಿ ಯು.ಜಿ.ಡಿ ನೀರು ಶೇಖರಣೆಯಾಗಿ ದುರ್ವಾಸನೆಯಿಂದ ಬರುತ್ತಿರುವುದರ ಬಗ್ಗೆ ಅಕ್ಷೇಪಣೆ ವ್ಯಕ್ತಪಡಿಸಿರುವುದರಿಂದ ಜಂಟಿ ತಪಾಸಣೆ ಮಾಡಲು ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಮೇಲ್ಕಂಡ ಎಲ್ಲಾ ಅಂಶಗಳಿಗೂ ಕ್ರಮ ಕೈಗೊಳ್ಳಬೇಕಾದ ಎಲ್ಲಾ ಅಧಿಕಾರಿಗಳು ಸೂಕ್ತ ಕ್ರಮ ತೆಗೆದುಕೊಂಡು ಮುಂದಿನ ಸಭೆಗೆ ಪೂರ್ಣ ಮಾಹಿತಿಯೊಂದಿಗೆ ಎಲ್ಲಾ ಅಧಿಕಾರಿಗಳು ಹಾಜರಾಗಲು ಮಾನ್ಯ ನೋಡೆಲ್ ಅಧಿಕಾರಿಗಳು ಸಭೆಯಲ್ಲಿ ಸೂಚಿಸಿದರು. ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾದನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಕಾರ್ಯದರ್ಶಿಗಳು/ ಸಹಾಯಕ ಅಭಿಯಂತರರು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ವಾರ್ಡ್‌ನ ನೋಡೆಲ್ ಅಧಿಕಾರಿಗಳು
ವಾರ್ಡ್ ಕಮಿಟಿ, ವಾರ್ಡ್ ನಂ. 01(ಕೆಂಪೇಗೌಡ)

ಪ್ರತಿಯನ್ನು:

ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ಸದಸ್ಯರುಗಳ ಮಾಹಿತಿಗಾಗಿ.

1. ಶ್ರೀ.ರಜನಿಕಾಂತ್ ಮಳ್ಳಿ, ನೋಡಲ್ ಅಧಿಕಾರಿಗಳು.

## ಅಧಿಕಾರಿಗಳ ಮಾಹಿತಿಗಾಗಿ.

1. ಮಾನ್ಯ ಜಂಟಿ ಆಯುಕ್ತರು ಯಲಹಂಕ ವಲಯರವರ ಮಾಹಿತಿಗಾಗಿ.
2. ಮಾನ್ಯ ಮುಖ್ಯ ಅಭಿಯಂತರರು ಯಲಹಂಕ ವಲಯರವರ ಮಾಹಿತಿಗಾಗಿ.
3. ಆರೋಗ್ಯ ವೈದ್ಯಾಧಿಕಾರಿಗಳು ಯಲಹಂಕ ವಲಯರವರ ಮಾಹಿತಿಗಾಗಿ.
4. ಸಹಾಯಕ ಕಾರ್ಯಪಾಲಕ ಅಭಿಯಂತರರು. ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ ರವರ ಸೂಕ್ತ ಕ್ರಮಕ್ಕಾಗಿ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು. ಘನತ್ಯಾಜ್ಯ ನಿರ್ವಹಣೆ ವಿಭಾಗ ಬಿ.ಬಿ.ಎಂ.ಪಿ ರವರ ಸೂಕ ಕ್ರಮಕ್ಕಾಗಿ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು. (ವಿದ್ಯುತ್) ಯಲಹಂಕರವರ ಸೂಕ್ತ ಕ್ರಮಕ್ಕಾಗಿ.